# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 76 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಸವರಾಜ ಪಾಟೀಲ್ ಇಟಗಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 01-02-2021 |
| ಉತ್ತರಿಸುವ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು: | ಬಂದಿದೆ<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದ್ದು, ವಿಶೇಷ ನೇಮಕಾತಿ ಸಮಿತಿ, ಅಧಿಸೂಚನೆ ಸಂಖ್ಯೆ:SRC/68/2019-20, ದಿನಾಂಕ:10-09-2020ರಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿ, ಈಗಾಗಲೇ ಮೂಲ ದಾಖಲೆಗಳನ್ನು ಪರಿಶೀಲಿಸಿಕೊಳ್ಳಲಾಗಿದೆ. ಸಮಾಲೋಚನೆಯ ಸಂದರ್ಭದಲ್ಲಿ ಖಾಲಿ ಇರುವ ಹುದ್ದೆಗಳನ್ನು ಪ್ರಚುರಪಡಿಸಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ. |
| ಆ | ರಾಯಚೂರು ಜಿಲ್ಲಾ ಆಸ್ಪತ್ರೆಯಲ್ಲಿ ಯಾವ ಯಾವ ತಜ್ಞ ವೈದ್ಯರ ಹುದ್ದೆ ಖಾಲಿ ಇದೆ? (ವಿವರ ಒದಗಿಸುವುದು) | ರಾಯಚೂರು ಜಿಲ್ಲಾ ಆಸ್ಪತ್ರೆಗೆ ಒಟ್ಟು 21 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 16 ತಜ್ಞ ವೈದ್ಯರ ಹುದ್ದೆಗಳು ಖಾಲಿಯಿರುತ್ತದೆ. |

**ಆಕುಕ 02 ಹೆಚ್‌ಎಸ್‌ಡಿ 2021**

(ಡಾ. ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು